ಪದವಿ ಕಾಲೇಜುಗಳಿಗೆ ಮೂಲಭೂತ ಸೌಲಭ್ಯ

148(345) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನ ಮಧುಗಿರಿ ಹಾಗೂ ಬಡುವನಹಳ್ಳಿ ಸರ್ಕಾರಿ ಪದವಿ ಕಾಲೇಜುಗಳು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು? (ವಿವರ ನೀಡುವುದು)

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

(ಅ) ಬಂದಿದೆ

(ಆ) ಮಧುಗಿರಿ ರೂ. 100.00 ಲಕ್ಷ ವೆಚ್ಚದಲ್ಲಿ ಹೆಚ್ಚುವರಿ ಕೊಠಡಿ ಮತ್ತು ರೂ. 10.00 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿದೆ. ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರ ಮುಕ್ತಾಯಗೊಳಿಸಲು ಸೂಚಿಸಿದೆ. ಬಡವನಹಳ್ಳಿ : ರೂ. 60.00 ಲಕ್ಷ ವೆಚ್ಚದಲ್ಲಿ ಹೆಚ್ಚುವರಿ ಕೊಠಡಿ ಮತ್ತು ರೂ. 5.00 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿದೆ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರ ಮುಕ್ತಾಯಗೊಳಿಸಲು ಸೂಚಿಸಿದೆ.

(ಇ) ಉದ್ಭವಿಸುವುದಿಲ್ಲ.

ಗೃಹ ಮಂಡಳಿಯು ಖರೀದಿಸಿರುವ ಭೂಮಿ

149(280) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ):– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದ ವಿವಿಧ ಗೃಹ ಮಂಡಳಿಯು ನಿವೇಶನ ಮತ್ತು ಮನೆಗಳನ್ನು ನಿರ್ಮಿಸುವುದಕ್ಕಾಗಿ ಭೂಮಿಯನ್ನು ಖರೀದಿಸಿ ಸ್ವಾಧೀನ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಒಂದು ವರ್ಷದಲ್ಲಿ ಈ ವಿಷಯಕ್ಕೆ ಸಂಬಂಧ ಪಟ್ಟಂತೆ ವಿವಿಧ ಜಿಲ್ಲೆಗಳಲ್ಲಿ ಗೃಹ ಮಂಡಳಿ ಮತ್ತು ಭೂಮಾಲೀಕರ ಮಧ್ಯೆ ವ್ಯಾಜ್ಯಗಳ ಎಷ್ಟು ಪ್ರಕರಣಗಳು ಯಾವ ಯಾವ ನ್ಯಾಯಾಲಯಗಳಲ್ಲಿ ಬಾಕಿ ಇವೆ ;

(ಇ) ಈ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಕಳೆದ ಒಂದು ವರ್ಷದ ಅವಧಿಯಲ್ಲಿ ಗೃಹ ಮಂಡಳಿಯು ಪ್ರತಿ ಜಿಲ್ಲೆಯಲ್ಲಿ ಎಷ್ಟೆಷ್ಟು ಪ್ರಮಾಣದ ಭುಮಿಯನ್ನು ಖರೀದಿ ಮಾಡಿದೆ. ಇದಕ್ಕೆ ಪಾವತಿ ಮಾಡಲಾದ ಹಣವೆಷ್ಟು ? (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

ಡಾ॥ ಎಂ.ಹೆಚ್. ಅಂಬರೀಷ್ (ಮಾನ್ಯ ವಸತಿ ಸಚಿವರು):–

(ಅ) ಬಂದಿದೆ.

(ಅ) ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ 2013–14ನೇ ಸಾಲಿನಲ್ಲಿ ದಾಖಲಾಗಿರುವ ಪ್ರಕರಣಗಳು ಈ ಕೆಳಕಂಡಂತಿವೆ.

1. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ 52 ಪ್ರಕರಣಗಳು ಬಾಕಿ ಇರುತ್ತವೆ.
2. ಮಾನ್ಯ ಜಿಲ್ಲಾ ನ್ಯಾಯಾಲಯಗಳಲ್ಲಿ 91 ಪ್ರಕರಣಗಳು ಬಾಕಿ ಇರುತ್ತವೆ.

(ಇ) ಕರ್ನಾಟಕ ಗೃಹ ಮಂಡಳಿಯ ಪ್ಯಾನಲ್‌ನಲ್ಲಿರುವ ವಕೀಲರುಗಳಿಗೆ ಆ ಎಲ್ಲಾ ಪ್ರಕರಣಗಳನ್ನು ವಹಿಸಿ, ಪ್ರಕರಣಗಳು ಮಂಡಳಿಯ ಪರವಾಗಿ ಇತ್ಯರ್ಥಗೊಳಿಸಲು ಕ್ರಮ ಕೈಗೊಳ್ಳುವಂತೆ ಕೋರಿ ಅವರುಗಳಿಗೆ ಅವಶ್ಯಕ ಪೂರಕ ದಾಖಲೆಗಳನ್ನು ಸಹ ಒದಗಿಸಲಾಗಿದೆ.

(ಈ) ಕಳೆದ ಒಂದು ವರ್ಷದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಮೀಸಗಾನಹಳ್ಳಿ ಮತ್ತು ಕೊಡಗುರ್ಕಿ ಗ್ರಾಮಗಳಲ್ಲಿ ಒಟ್ಟು 19–26 ಎಕರೆ ಜಮೀನನ್ನು ಖರೀದಿ ಮಾಡಲಾಗಿದೆ ವಿವರ ಈ ಕೆಳಕಂಡಂತಿದೆ:

ಮೀಸಗಾನಹಳ್ಳಿ:			
ಕ್ರಮ ಸಂಖ್ಯೆ	ಸರ್ವೆ ನಂ.	ವಿಸ್ತೀರ್ಣ ಎ-ಗುಂ	ಮೊತ್ತ (ರೂ. ಲಕ್ಷಗಳಲ್ಲಿ)
1	21/1	1-01	41,00,000.00
2	61/12	0-36	36,00,000.00
3	67/1	3-33	1,71,33,323.00
4	24/3	1-09	49,00,000.00
5	22/4	3-05	1,31,25,000.00
6	22/2	0-24 1/2	25,72,500.00
		0-24 1/2	25,72,500.00
		11-31	**4,80,03,373.00**
ಕೊಡಗುರ್ಕಿ:			
1	173/2	2-00	1,00,00,000.00
2	146	2-38	1,18,00,000.00
3	187	0-32	32,00,000.00
4	143/1	0-27	35,99,438.00
5	52	1-00	40,00,000.00
		08-13	3,25,99,428.00
	ಒಟ್ಟು	**19-26**	**8,06,02,761.00**